# Bangalore
# Regional News
# 12.02.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಸಂಪುಟ ಸಭೆ; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ಆಯೋಜನೆ ಕುರಿತಂತೆ ಇಂದು ತೀರ್ಮಾನ
2. ರಾಜ್ಯ ಸರ್ಕಾರ ಒಂದು ಸಾವಿರ ದಿನ ಪೂರೈಸಿದ ಹಿನ್ನೆಲೆ; ಭೂಮಿ ಗ್ಯಾರಂಟಿ ಘೋಷಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಕಾಫಿ ತೋಟಗಳ ಆನ್‌ಲೈನ್ ಹರಾಜು ಪ್ರಕ್ರಿಯೆ ಸ್ಥಗಿತಕ್ಕೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸೂಚನೆ
4. ಬೆಂಗಳೂರಿನಲ್ಲಿ ನಾಳೆ ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನ
5. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳ ಕೊರತೆ – ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ

***************

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಹಾಗೂ ಅಂತಾರಾಷ್ಟ್ರೀಯ ಪಂದ್ಯ ಆಯೋಜನೆ ಕುರಿತಂತೆ ಜಿಬಿಎ ಮುಖ್ಯ ಆಯುಕ್ತರ ನೇತೃತ್ವದ ಸಮಿತಿಯು ಇಂದು ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಸಭೆಯಲ್ಲಿ ಸಾಧಕ–ಬಾಧಕಗಳ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ನಡೆಸಲು ಕೆಎಸ್‌ಸಿಎ ಅಧಿಕಾರಿಗಳು ಸಿದ್ಧರಾಗಿದ್ದು, ಉದ್ಘಾಟನಾ ಪಂದ್ಯ ಬೆಂಗಳೂರಿನಲ್ಲೇ ನಡೆಸಲು ಅನುಮತಿ ಕೋರಿದ್ದಾರೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಸಂಪುಟ ಸಭೆಯಲ್ಲಿ ಈ ಕುರಿತಂತೆ ಪ್ರಮುಖವಾಗಿ ಚರ್ಚೆ ನಡೆಯಲಿದೆ. ಪಂದ್ಯ ಆಯೋಜನೆ ಕುರಿತಂತೆ ಸಂಪುಟ ಸಭೆಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಗೃಹ ಸಚಿವರು ತಿಳಿಸಿದ್ದಾರೆ.

***************

ರಾಜ್ಯ ಸರ್ಕಾರ ಸಾವಿರ ದಿನ ಪೂರೈಸಿದ ಹಿನ್ನೆಲೆಯಲ್ಲಿ 6ನೇ ಗ್ಯಾರಂಟಿಯಾಗಿ ಭೂಮಿ ಗ್ಯಾರಂಟಿಯನ್ನು ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೂಮಿಯ ಹಕ್ಕುಪತ್ರ ಇಲ್ಲದ ಲಕ್ಷಾಂತರ ಜನರಿಗೆ ಹಕ್ಕುಪತ್ರ, ಪಟ್ಟಾ ದಾಖಲೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಗ್ಯಾರಂಟಿಯ ಹೊರತಾಗಿ ರಾಜ್ಯ ಸರ್ಕಾರದ ಮತ್ತೊಂದು ಮಹತ್ವಾಕಾಂಕ್ಷಿ ಯೋಜನೆ ಇದಾಗಿದೆ ಎಂದು ತಿಳಿಸಿದ್ದಾರೆ.

***************

ಸಾಲದಲ್ಲಿರುವ ಕಾಫಿ ತೋಟಗಳ ಆನ್ ಲೈನ್ ಹರಾಜು ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸುವಂತೆ ಕೇಂದ್ರ ಹಣಕಾಸು ಖಾತೆ ಸಚಿವೆ ನಿರ್ಮಲ ಸೀತಾರಾಮಾನ್ ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಉಡುಪಿ– ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಈ ಕುರಿತಂತೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ನೇತೃತ್ವದಲ್ಲಿ ಹಣಕಾಸು ಸಚಿವರನ್ನು ಭೇಟಿ ಮಾಡಿ, ಈ ಕುರಿತಂತೆ ಮನವರಿಕೆ ಮಾಡಲಾಗಿತ್ತು.

ಸರ್‌ಫ್ರೈಸಿ ಕಾಯ್ದೆಯಡಿ ಸಾಲ ಪಡೆದಿರುವ ಕಾಫಿ ಬೆಳೆಗಾರರ ತೋಟಗಳನ್ನು ಮಧ್ಯವರ್ತಿಗಳು ವಿದೇಶಗಳಲ್ಲಿ ಇದ್ದುಕೊಂಡು ಜಮೀನು ಖರೀದಿ ಮಾಡಿ ರೈತರಿಗೆ ಮೋಸ ಮಾಡುತ್ತಿದ್ದರು.

ಈ ಹಿನ್ನೆಲೆಯಲ್ಲಿ ಆನ್ ಲೈನ್ ಪ್ರಕ್ರಿಯೆ ನಿಲ್ಲಿಸುವಂತೆ ಮಾಡಿದ್ದ ಮನವಿಗೆ ಸ್ಪಂದಿಸಿದ ಸಚಿವರು, ಆನ್‌ಲೈನ್ ಹರಾಜು ಪ್ರಕ್ರಿಯೆ ಸ್ಥಗಿತಮಾಡುವಂತೆ ಆದೇಶ ನೀಡಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ಬೆಂಗಳೂರಿನಲ್ಲಿ ನಾಳೆಯಿಂದ ಎರಡು ದಿನಗಳ ಕಾಲ ಅಂತಾರಾಷ್ಟ್ರೀಯ ಅಣೆಕಟ್ಟು ಸುರಕ್ಷತಾ ಸಮ್ಮೇಳನ ನಡೆಯಲಿದೆ.
ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್, ಭಾರತದಲ್ಲಿ ಒಟ್ಟು **6** ಸಾವಿರದ **628** ಅಣೆಕಟ್ಟುಗಳಿದ್ದು, ಕರ್ನಾಟಕ **231** ಅಣೆಕಟ್ಟುಗಳನ್ನು ಹೊಂದಿದೆ. ಅಣೆಕಟ್ಟುಗಳ ಸುರಕ್ಷತೆ ಹಿನ್ನೆಲೆಯಲ್ಲಿ ಕೇಂದ್ರ ಜಲಶಕ್ತಿ ಸಚಿವಾಲಯದ ಸಹಯೋಗದಲ್ಲಿ ಈ ಸಮ್ಮೇಳನ ನಡೆಯಲಿದೆ ಎಂದು ಮಾಹಿತಿ ನೀಡಿದ್ದಾರೆ.
ಹತ್ತು ದೇಶಗಳ **25** ಅಂತಾರಾಷ್ಟ್ರೀಯ ತಜ್ಞರು ಸೇರಿದಂತೆ **400**ಕ್ಕೂ ಹೆಚ್ಚು ಮಂದಿ ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ರಾಜ್ಯದ **58** ಅಣೆಕಟ್ಟೆಗಳ ಸುರಕ್ಷತೆಗೆ ಒಂದು ಸಾವಿರದ **500** ಕೋಟಿ ರೂಪಾಯಿ ವೆಚ್ಚದಲ್ಲಿ ದುರಸ್ಥಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ವಿವರಿಸಿದ್ದಾರೆ.
ಇದೇ ವೇಳೆ ಬೆಂಗಳೂರಿನಲ್ಲಿ ಡಬ್ಬಲ್ ಡೆಕ್ಕರ್, ಮೆಟ್ರೋ ಯೋಜನೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿರುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಈ ಸಂಬಂಧ ಕೇಂದ್ರ ನಗರಾಭಿವೃದ್ಧಿ ಸಚಿವರನ್ನು ಭೇಟಿಯಾಗಿ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

***************

ರಾಜ್ಯ ಸರ್ಕಾರವು ಈ ವರ್ಷ ರಾಗಿ ಬೆಳೆಯುವ ರೈತರಿಂದ ಬೆಂಬಲ ಬೆಲೆಯೊಂದಿಗೆ **6** ಲಕ್ಷ ಮೆಟ್ರಿಕ್ ಟನ್‌ನಷ್ಟು ರಾಗಿ ಖರೀದಿಸುವ ಗುರಿಯನ್ನು ಹೊಂದಿದೆ ಎಂದು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ.
ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ **2025–26**ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ರಾಗಿಯನ್ನು ಖರೀದಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕನಿಷ್ಠ ಬೆಂಬಲ ಯೋಜನೆಯಡಿ ಪ್ರತಿ ಕ್ವಿಂಟಾಲ್ ರಾಗಿಗೆ **4** ಸಾವಿರದ **886** ರೂಪಾಯಿಗಳನ್ನು ನಿಗದಿ ಪಡಿಸಲಾಗಿದೆ. ಪ್ರತಿ ರೈತರಿಂದ ಒಂದು ಎಕರೆಗೆ **10** ಕ್ವಿಂಟಾಲ್ ನಂತೆ ಗರಿಷ್ಟ **50** ಕ್ವಿಂಟಾಲ್ ಗಳನ್ನು ಮೀರದಂತೆ ಉತ್ತಮ ಗುಣಮಟ್ಟದ ರಾಗಿ ಖರೀದಿಸಲಾಗುತ್ತಿದೆ, ನೋಂದಾಯಿತ ರೈತರೇ ರಾಗಿ ಖರೀದಿ ಕೇಂದ್ರಗಳಿಗೆ ರಾಗಿ ತರುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ.

***************

ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಔಷಧಗಳನ್ನು ಖರೀದಿಸಲು ಹಣವಿಲ್ಲದೆ ಆರೋಗ್ಯ ಇಲಾಖೆ ಸಂಕಷ್ಟದಲ್ಲಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸ್ಪತ್ರೆಗಳಲ್ಲಿ ದೊರೆಯಬೇಕಿದ್ದ **800** ಔಷಧಗಳಲ್ಲಿ ಕೇವಲ **168** ಔಷದಿಗಳು ಮಾತ್ರ ಲಭ್ಯವಿದೆ. ಔಷಧ ಖರೀದಿಗೆ ಟೆಂಡರ್ ಕರೆಯುವುದಾಗಿ ಹೇಳಿದ್ದ ಆರೋಗ್ಯ ಸಚಿವರು ಈವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ.
ಆಸ್ಪತ್ರೆಗಳಲ್ಲಿ ಜೀವ ನಿರೋಧಕ ಔಷಧಗಳಿಲ್ಲದೆ ವೈದ್ಯರು ಶಸ್ತ್ರ ಚಿಕಿತ್ಸೆಗಳನ್ನು ಮುಂದೂಡುತ್ತಿದ್ದಾರೆ. ಕೆಲವೆಡೆ ಹೊರರೋಗಿಗಳ ನೋಂದಣಿ ಶುಲ್ಕವನ್ನು ಔ..ಷಧ ಖರೀದಿಗೆ ಬಳಸುವ ಮಟ್ಟಿಗೆ ಹಣಕಾಸಿನ ಕೊರತೆ ಎದುರಾಗಿದೆ ಎಂದು ದೂರಿದ್ದಾರೆ.

***************

ಸಂಯುಕ್ತ ಕಿಸಾನ್ ಮೋರ್ಚಾ ಸಂಘಟನೆಯ ರೈತ ಜಾಗೃತಿ ಯಾತ್ರೆಯ ವಿವಿಧ ರಾಜ್ಯಗಳ ರೈತ ಮುಖಂಡರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಮಾಡಿ, ಕನಿಷ್ಠ ಬೆಂಬಲ ಬೆಲೆ ಗ್ಯಾರಂಟಿ ಕಾನೂನು ಜಾರಿಗೆ ತರಲು ಒತ್ತಾಯಿಸಿದರು.
ರಾಜ್ಯ ಸರ್ಕಾರ ಅಧಿವೇಶನದಲ್ಲಿ ನಿರ್ಣಯ ಕೈಗೊಂಡು ಕಾನೂನು ಜಾರಿಗೆ ತರಲು ಕೇಂದ್ರ ಸರ್ಕಾರವನ್ನು ಒತ್ತಾಯಿಸುವಂತೆ ಕೋರಿದರು. ಇದೇ ವೇಳೆ ಭಾರತ – ಅಮೆರಿಕ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ವಿರೋಧಿಸುವಂತೆ ಮನವಿ ಮಾಡಿದರು. ಮನವಿ ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಚರ್ಚಿಸಿ, ಒಂದು ವಾರದಲ್ಲಿ ತೀರ್ಮಾನ ತಿಳಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.
ಈ ಸಂದರ್ಭದಲ್ಲಿ ಉತ್ತರಪ್ರದೇಶದ ನಿತಿನ್ ಬಾಲ್ಯನ, ರಾಜಸ್ಥಾನದ ಇಂದ್ರಜಿತ್ ಪಲ್ಲಿವಾನ್, ಮಧ್ಯಪ್ರದೇಶದ ಲೀಲಾಧರ್ ರಜಪೂತ್, ಪಂಜಾಬ್‌ನ ಹರ್‌ಸುಲಿಂದರ್ ಸಿಂಗ್, ಕುರುಬೂರು ಶಾಂತಕುಮಾರ್ ಸೇರಿದಂತೆ ರಾಜ್ಯದ ವಿವಿಧ ರೈತ ಮುಖಂಡರು ಉಪಸ್ಥಿತರಿದ್ದರು.

***************

29 ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿ 4 ಕಾರ್ಮಿಕ ಸಂಹಿತೆ ಜಾರಿಗೆ ತಂದಿರುವ ಕೇಂದ್ರ ಸರ್ಕಾರದ ನಿರ್ಧಾರದ ವಿರುದ್ಧ ಕಾರ್ಮಿಕ ಸಂಘಟನೆಗಳ ಒಕ್ಕೂಟ ನೀಡಿದ್ದ ಅಖಿಲ ಭಾರತ ಮುಷ್ಕರಕ್ಕೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಅಂಗಡಿ ಮುಂಗಟ್ಟುಗಳು ಎಂದಿನಂತೆ ತೆರೆದಿದ್ದು, ಬಸ್ ಸಂಚಾರ ಸಹಜ ಸ್ಥಿತಿಯಲ್ಲಿತ್ತು. ಮಂಗಳೂರು ನಗರದ ಪ್ರಮುಖ ವಾಣಿಜ್ಯ ಕೇಂದ್ರವಾದ ಹಳೆ ಬಂದರು ಸಗಟು ಮಾರುಕಟ್ಟೆಯ ಪ್ರದೇಶ ಸ್ತಬ್ಧವಾಗಿತ್ತು.

ಹೃದಯ ಭಾಗದ ಕ್ಲಾಕ್ ಟವರ್ ಬಳಿ ವಿವಿಧ ವಿಭಾಗಗಳ ಕಾರ್ಮಿಕರು, ನೌಕರರು ಕೆಲ ಹೊತ್ತು ರಸ್ತೆತಡೆ ನಡೆಸಿದರು.

***************

ಕಾರವಾರದ ಬಾವಳದಲ್ಲಿ ಕಡಲಾಮೆ ಮೊಟ್ಟೆಯಿಂದ ಹೊರ ಬಂದ 66 ಮರಿಗಳನ್ನು ಇಂದು ಸುರಕ್ಷಿತವಾಗಿ ಸಮುದ್ರಕ್ಕೆ ಸೇರಿಸಲಾಯಿತು.

ಪ್ರತಿ ವರ್ಷ ಡಿಸೆಂಬರ್‌ನಿಂದ ಮೇ ತಿಂಗಳವರೆಗೆ ಕಡಲಾಮೆಯ ಸಂತಾನೋತ್ಪತ್ತಿಯ ಸಮಯವಾಗಿದ್ದು, ಈ ಭಾಗದ ಕಡಲತೀರದಲ್ಲಿ ಆಮೆಗಳು ಮೊಟ್ಟೆ ಇಟ್ಟು ಮುಚ್ಚಿ ತೆರಳುತ್ತದೆ. ನಂತರ ಇದನ್ನು ಅರಣ್ಯ ಇಲಾಖೆ ಗುರುತಿಸಿ ಸಂರಕ್ಷಣೆ ಮಾಡಿ ಮರಿ ಹೊರ ಬಂದ ನಂತರ ಕಡಲಿಗೆ ಬಿಡಲಾಗುತ್ತಿದೆ.

***************

ಮೈಸೂರು ಜಿಲ್ಲಾ ಕ್ರೀಡಾಕೂಟದಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಎಸ್.ಯುಕೇಶ್ ಕುಮಾರ್ ಕರೆ ನೀಡಿದ್ದಾರೆ.

ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿಂದು ಆಯೋಜಿಸಿದ್ದ 'ಮೈಸೂರು ಜಿಲ್ಲಾ ಆರ್.ಡಿ.ಪಿ.ಆರ್ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ' ಉದ್ಘಾಟಿಸಿ ಮಾತನಾಡಿದ ಅವರು ಎಲ್ಲಾ ನೌಕರರು ತಮ್ಮ ಆರೋಗ್ಯ ಮತ್ತು ಕೌಟಂಬಿಕ ಜೀವನದ ಕಡೆಗೆ ಹೆಚ್ಚಿನ ಕಾಳಜಿವಹಿಸಿ ಎಂದು ಸಲಹೆ ನೀಡಿದ್ದಾರೆ.

***************

ವಿದ್ಯಾರ್ಥಿಗಳು ಆತ್ಮವಿಶ್ವಾಸ ಕಳೆದುಕೊಳ್ಳದಂತೆ ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಆರ್. ನಂದಿನಿ ಹೇಳಿದ್ದಾರೆ.

ವಿದ್ಯಾರ್ಥಿಗಳು ಏಕಾಗ್ರತೆಯಿಂದ ಶಿಕ್ಷಣವನ್ನು ಪಡೆಯಬೇಕು. ಪಬ್ಲಿಕ್ ಶಾಲೆಗಳಿಗಿಂತ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಹೆಚ್ಚು ಅಂಕ ಪಡೆದು ಸಮಾಜಕ್ಕೆ ಮಾದರಿಯಾಗುವಂತೆ ಶಿಕ್ಷಕರು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಬೇಕು ಎಂದು ಕರೆ ನೀಡಿದ್ದಾರೆ.

***************

ಕೋಲಾರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಲು ಹಾಗೂ ಮುಂಬರುವ ಬೇಸಿಗೆ ಎದುರಿಸಲು ಸಕಲ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******ಮುಕ್ತಾಯ********